**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 715/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.06**

**ದಿನಾಂಕಃ 25.03.2026** **ಸಿಡಬ್ಲ್ಯೂ.08**

| | |
|---|---|
| ಹೆಸರು | ಶ್ರೀನಿವಾಸ ಡಿ ಟಿ |
| ತಂದೆ ಹೆಸರು | ಜಿ ತಿಮ್ಮಶೆಟ್ಟಪ್ಪ |
| ವಯಸ್ಸು | 53 ವರ್ಷ |
| ಉದ್ಯೋಗ | ಎ ಎಸ್ ಐ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು ಸನ್ 2021 ರಿಂದ ಇಲ್ಲಿಯವರೆಗೆ ಮಲೆಬೆನ್ನೂರು ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 29.10.2021 ರಂದು ಸಂಜೆ 4.30 ಗಂಟೆಗೆ ನಾನು ಠಾಣೆಯಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿ ಠಾಣಾ ಗುನ್ನೆ 179/2021 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಗುರುತಿಸಿದ ಪ್ರ ವ ವರದಿಯನ್ನು ನಿಪಿ. 5 ಎಂದು ಸಾಕ್ಷಿಯ ಸಹಿಯನ್ನು ನಿಪಿ.5 (ಎ) ಎಂದು ಗುರುತಿಸಲಾಯಿತು. ಅದೇ ದಿನ ಸಂಜೆ 4.55 ಗಂಟೆಗೆ ಕಲ್ಲೇಶ್ವರ ಬಡಾವಣೆಯ ಚಾಸಾ.1 ರವರ ವಾಸದ ಮನೆಯ ಮುಂದಿನ ರಸ್ತೆಗೆ ಬೇಟಿ ನೀಡಿ ಚಾಸಾ.7 ರವರ ಮೂಲಕ ಚಾಸಾ.2 ಮತ್ತು 3 ರವರಿಗೆ ನೋಟಿಸ ನೀಡಿ ಪಂಚರಾಗಿ ಸಹಕರಿಸಲು ಕೇಳಿಕೊಂಡಿದ್ದು ಸದರಿಯವರು ಒಪ್ಪಿರುತ್ತಾರೆ. ಸಾಕ್ಷಿಯು ಗುರುತಿಸಿದ ನೋಟಿಸನ್ನು ನಿಪಿ. 6 ಎಂದು ಸಾಕ್ಷಿಯ ಸಹಿಯನ್ನು ನಿಪಿ.6 (ಎ) ಎಂದು ಗುರುತಿಸಲಾಯಿತು. ಸದರಿಯವರ ಸಮಕ್ಷಮ ಸಂಜೆ 5.00 ರಿಂದ 6.00 ಗಂಟೆಗೆ ಪಂಚನಾಮೆ ಜರುಗಿಸಿರುತ್ತೇನೆ. ಸಾಕ್ಷಿಯು ಗುರುತಿಸಿದ ಪಂಚನಾಮೆಯನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.2( ಸಿ) ಎಂದು ಗುರುತಿಸಲಾಯಿತು. ಸದರಿ ಕಾಲಕ್ಕೆ ಚಾಸಾ.1 ರವರು ಹಾಜರುಪಡಿಸಿದ ಒಂದು ಕೆಂಪು ಬಣ್ಣದ ಹರಿದಿರುವ ನೈಟಿಯನ್ನು ಮುಂದಿನ ಕ್ರಮಕ್ಕಾಗಿ ಅಮಾನತು ಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ಗುರುತಿಸಿದ ನೈಟಿಯನ್ನು ಈಗಾಗಲೇ ಮು.ಮಾ 1 ಎಂದು ಗುರುತಿಸಲಾಗಿದೆ. ನಂತರ ಕಚ್ಚಾ ನಕಾಶೆ

ತಯಾರಿಸಿ ಛಾಯ ಚಿತ್ರ ತೆಗೆದಿರುತ್ತೇನೆ. ಸಾಕ್ಷಿಯು ಗುರುತಿಸಿದ ಕಚ್ಚಾ ನಕಾಶೆಯನ್ನು ಈಗಾಗಲೇ ನಿಪಿ.3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.3 (ಸಿ) ಎಂದು ಗುರುತಿಸಲಾಯಿತು. ಸದರಿ ಕಾಲಕ್ಕೆ ಚಾಸಾ.7 ರವರು ಫೋಟೋ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ಈಗಾಗಲೇ ನಿಪಿ.4 ಎಂದು ಗುರುತಿಸಲಾಗಿದೆ. ಅದೇ ದಿನ ಚಾಸಾ.7 ರವರಿಂದ 65 ಬಿ ಪ್ರಮಾಣ ಪತ್ರ ಪಡೆದಿರುತ್ತೇನೆ. ಸಾಕ್ಷಿಯು ಗುರುತಿಸಿದ 65 (ಬಿ) ಪ್ರಮಾಣ ಪತ್ರವನ್ನು ನಿಪಿ.7 ಎಂದು ಸಾಕ್ಷಿಯ ಸಹಿಯನ್ನು ನಿಪಿ.7 (ಎ) ಎಂದು ಗುರುತಿಸಲಾಯಿತು. ನಂತರ ಚಾಸಾ.2 ಮತ್ತು 3 ರವರ ಹೇಳಿಕೆ ಪಡೆದಿರುತ್ತೇನೆ. ನಂತರ ಚಾಸಾ.1 ರವರ ಮರುಹೇಳಿಕೆ ಪಡೆದಿರುತ್ತೇನೆ. ನಂತರ ಚಾಸಾ.4 ರಿಂದ 6 ರವರ ಹೇಳಿಕೆ ಪಡೆದಿರುತ್ತೇನೆ. ಪಂಚನಾಮೆ ಕಾಲಕ್ಕೆ ಅಮಾನತು ಪಡಿಸಿಕೊಂಡಿರುವ ನೈಟಿಯನ್ನು ಠಾಣಾ ಪಿ ಎಫ್ ನಂ. 137/2021 ರಂತೆ ನೋಂದಾಯಿಸಿಕೊಂಡು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.9 ರವರಿಗೆ ನಿವೇದಿಸಿಕೊಂಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಕೆ ಸಿ ವಕೀಲರಿಂದಃ**

ಆರೋಪಿತರು ಸಹ ಪಿರ್ಯಾದಿ ಹಾಗೂ ಅವರ ಕುಟುಂಬಸ್ಥರ ವಿರುದ್ಧ ದೂರು ದಾಖಲಿಸಿದ್ದಾರೆ ಎಂದರೆ ಸರಿ. ಆರೋಪಿತರು ಪಿರ್ಯಾದಿಯರ ವಿರುದ್ಧ ಮೊದಲು ದೂರು ಸಲ್ಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿತರು ಯಾವುದೇ ತಪ್ಪು ಮಾಡದಿದ್ದರೂ ಸಹ ಪಿರ್ಯಾದಿ ನೀಡಿದ ಸುಳ್ಳು ದೂರನ್ನು ಸ್ವೀಕರಿಸಿ ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಚಾಸಾ.1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ.2 ಮತ್ತು 3 ನ್ನು ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಚಾಸಾ.1 ರವರ ಮೇಲೆ ಯಾವುದೇ ರೀತಿಯ ಹಲ್ಲೆ ಮಾಡದಿದ್ದರೂ ಸಹ ಪ್ರಕರಣಕ್ಕೆ ಅನುಕೂಲವಾಗಲಿ ಎಂದು ಚಾಸಾ.1 ರವರು ನೀಡಿದ ನೈಟಿಯನ್ನು ಪಡೆದು ಸುಳ್ಳು ಮಾಲು ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಿಪಿ.4 ನ್ನು ಸೃಷ್ಟಿ ಮಾಡಿಕೊಂಡಿದ್ದೇವೆ ಎಂದರೆ ಸರಿಯಲ್ಲ. ನಿಪಿ.4 ಕ್ಕೆ ಸಂಬಂಧಿಸಿದ ಸಿಡಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಚಾಸಾ.1 ರವರಿಂದ ಸುಳ್ಳು ಮರುಹೇಳಿಕೆ ಪಡೆದಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿತರ ವಿರುದ್ಧ ಸುಳ್ಳು ತನಿಖೆ ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ.4 ರಲ್ಲಿ ಛಾಯ ಚಿತ್ರವನ್ನು ತೆಗೆದವರ ಹೆಸರು ನಮೂದು ಇಲ್ಲ ಎಂದರೆ ಸಾಕ್ಷಿಯು ಛಾಯ ಚಿತ್ರದಲ್ಲಿ ಇದ್ದವರ ಹೆಸರುಗಳನ್ನು ಮಾತ್ರ ನಮೂದಿಸಿರುತ್ತೇವೆ ಎಂದು ನುಡಿಯುತ್ತಾರೆ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

**ಓದಿ ಹೇಳಿ ಕೇಳಿ ಸರಿ ಇದೆ.**

sd/

2 ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ